ದುರಸ್ತಿಪಡಿಸಲು ಈಗಾಗಲೇ ಕ್ರಮ ಕೈಗೊಳ್ಳಲಾಗಿದೆ ದುರಸ್ತಿ ಕಾಮಗಾರಿಯನ್ನು ಲೋಕೋಪಯೋಗಿ ಇಲಾಖಾ ವತಿಯಿಂದ ಕೈಗೆತ್ತಿಕೊಳ್ಳಲಾಗಿದೆ

ಇ) ದುರಸ್ತಿ ಕಾಮಗಾರಿಗಳು ಪ್ರಗತಿಯಲ್ಲಿದೆ

ಈ) ಕಳೆದ 3 ವರ್ಷಗಳಲ್ಲಿ ಕ್ರೀಡಾಂಗಣ ನಿರ್ವಹಣೆಗಾಗಿ ಈ ಕೆಳಕಾಣಿಸಿದಂತೆ ಅನುದಾನ ಬಿಡುಗಡೆ ಮಾಡಲಾಗಿದೆ

1 2004–05 ರೂ 50,000 (ರಾಜ್ಯವಲಯ)

2 2005–06 ರೂ 1,30,000 (ಜಿಲ್ಲಾ ಪಂಚಾಯತ್ ಅನುದಾನ)

3 2006–07 ರೂ 2,30 000 (ಜಿಲ್ಲಾ ಪಂಚಾಯತ್ ಅನುದಾನ)

ಈ) ಆದಷ್ಟು ಬೇಗ ಪೂರ್ಣಗೊಳಿಸಲಾಗುವುದು

896(899) ಶ್ರೀ ಕ್ಯಾತಸಂದ್ರ ಎನ್ ರಾಜಣ್ಣ (ಬೆಳ್ಳಾವಿ) ಮಾನ್ಯ ಗೃಹ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಧುಗಿರಿ ತಾಲ್ಲೂಕು, ದೊಡ್ಡೇರಿ ಹೋಬಳಿ ಬಡವನಹಳ್ಳಿಯಲ್ಲಿ ಹಾಲಿ ಇರುವ ಔಟ್‌ಪೋಸ್ಟ್ ಠಾಣೆಯನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ,

ಆ) ಹಾಗಿದ್ದಲ್ಲಿ ಈ ಬೇಡಿಕೆಯನ್ನು ಈಡೇರಿಸಲು ಸರ್ಕಾರ ಹಾಕಿ ಕೊಂಡಿರುವ ಕಾಲಮಿತಿಯೇನು?

ಶ್ರೀ ಎಂ ಪಿ ಪ್ರಕಾಶ್ (ಗೃಹ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು)

ಅ) ಸರ್ಕಾರದ ಪರಿಶೀಲನೆಯಲ್ಲಿದೆ

ಆ) ಕಾಲಮಿತಿ ಇರುವುದಿಲ್ಲ

897(1256) ಶ್ರೀ ಕ್ಯಾತಸಂದ್ರ ಎನ್ ರಾಜಣ್ಣ (ಬೆಳ್ಳಾವಿ) ಮಾನ್ಯ ಯುವ ಜನ ಸೇವಾ ಹಾಗೂ ಕ್ರೀಡಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿನ ಪ್ರತಿಷ್ಠಿತ ಕ್ರೀಡಾಪಟುಗಳಿಗೆ ನೀಡುವ "ಏಕಲವ್ಯ" ಪ್ರಶಸ್ತಿಯನ್ನು 2002 ರಿಂದ 2006ನೇ ಸಾಲಿನವರೆಗೆ ಪ್ರತಿಬಾರಿಯೂ ಸರಿಯಾಗಿ ನೀಡುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಹೌದಾದಲ್ಲಿ ವಿಳಂಬವಾಗಲು ಕಾರಣಗಳೇನು ಹಾಗೂ ಏಕಲವ್ಯ ಪ್ರಶಸ್ತಿಯ ಜೊತೆಗೆ ಸರ್ಕಾರ ನೀಡುತ್ತಿರುವ ನಗದೆಷ್ಟು,